**All India Radio: Bangalore**
**Regional Bulletin In Kannada**
**13.03.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

1. **ಗುಣಮಟ್ಟದ ಔಷಧ ಪೂರೈಕೆಗೆ ಆದ್ಯತೆ ; ಔಷಧ ನಿಯಂತ್ರಕರ ನೇಮಕಾತಿ ಸಮಸ್ಯೆ ಬಗೆಹರಿಸಲು ಕ್ರಮ – ದಿನೇಶ್ ಗುಂಡೂರಾವ್**
2. **ಹೊಸ ಪಿಂಚಣಿ ಪದ್ಧತಿ ಎನ್‌ಪಿಎಸ್ ರದ್ದುಪಡಿಸಿ ಹಳೆ ಪಿಂಚಣಿ ಪದ್ಧತಿ ಮರು ಜಾರಿಗೆ ಬದ್ಧ – ಸಚಿವ ಎನ್.ಎಸ್. ಬೋಸರಾಜು**
3. **ಆಲಮಟ್ಟಿ ಜಲಾಶಯದ ಅಣೆಕಟ್ಟೆ 524.25 ಮೀಟರ್‌ಗೆ ಹೆಚ್ಚಿಸಲು ಕ್ರಮ – ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್**
4. **ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ; ಇಂದು ಮುಂಬೈ ಇಂಡಿಯನ್ಸ್–ಗುಜರಾತ್ ಜೈಂಟ್ಸ್ ಹಣಾಹಣಿ**

****************

ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಗುಣಮಟ್ಟದ ಔಷಧಗಳನ್ನು ಪೂರೈಸಲು ಸರ್ಕಾರ ವ್ಯಾಪಕ ಕ್ರಮಗಳನ್ನು ಕೈಗೊಂಡಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನಸಭೆಗಿಂದು ಹೇಳಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಡಾ. ಸಿ.ಎನ್. ಅಶ್ವತ್ಥ ನಾರಾಯಣ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಔಷಧಗಳ ಗುಣಮಟ್ಟ ಪರೀಕ್ಷಿಸಲು ಔಷಧ ನಿಯಂತ್ರಕರ ಕೊರತೆ ಇದೆ. 258 ಮಂದಿ ಔಷಧ ನಿಯಂತ್ರಕರ ನೇಮಕಾತಿ ಕುರಿತಂತೆ ಹೈಕೋರ್ಟ್ ನೀಡಿರುವ ಆದೇಶ ಪರಿಪಾಲನೆಗೆ ಸರ್ಕಾರ ಸಿದ್ಧವಾಗಿದೆ. ಆದರೆ ಈ ಪ್ರಕರಣ ಇದೀಗ ಸುಪ್ರೀಂಕೋರ್ಟ್ ನಲ್ಲಿರುವುದರಿಂದ ವಿಳಂಬವಾಗಿದೆ. ನ್ಯಾಯಾಲಯದ ಆದೇಶದ ನಂತರ ಸರ್ಕಾರ ಸೂಕ್ತ ತೀರ್ಮಾನ ಕೈಗೊಳ್ಳಲಿದೆ ಎಂದು ಹೇಳಿದರು.

ಬಿಜೆಪಿಯ ಜನಾರ್ಧನ ರೆಡ್ಡಿ ಅವರ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಸಚಿವ ದಿನೇಶ್ ಗುಂಡೂರಾವ್, ಬಳ್ಳಾರಿ ಆಯುರ್ವೇದ ಆಸ್ಪತ್ರೆಗೆ ಸಿಬ್ಬಂದಿ ನಿಯೋಜನೆ ವಿಳಂಬವಾಗಿದೆ. ನೇಮಕಾತಿಯಾದವರು ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ. ಬಳ್ಳಾರಿಯಲ್ಲಿ ಕೆಲಸ ಮಾಡುವವರಿಗೆ ವಿಶೇಷ ಪ್ರೋತ್ಸಾಹ ನೀಡುವ ಬಗ್ಗೆಯೂ ಸರ್ಕಾರ ಪರಿಶೀಲನೆ ನಡೆಸುತ್ತಿದೆ ಎಂದರು.

ಕಾಂಗ್ರೆಸ್ ನ ವಿಜಯಾನಂದ ಕಾಶಪ್ಪನವರ್ ಪ್ರಶ್ನೆಗೆ ಉತ್ತರಿಸಿದ ಸಚಿವ ದಿನೇಶ್ ಗುಂಡೂರಾವ್, ಬಾಗಲೋಕೋಟೆ ಜಿಲ್ಲೆಯ ಇಳಕಲ್‌ನಲ್ಲಿ ಸಮುದಾಯ ಆರೋಗ್ಯ ಕೇಂದ್ರವಿದ್ದು, ಇದನ್ನು ಜನಸಂಖ್ಯೆ ಆಧಾರದ ಮೇಲೆ ಮುಂಬರುವ ದಿನಗಳಲ್ಲಿ ತಾಲೂಕು ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರ ಪರಿಶೀಲನೆ ನಡೆಸಲಿದೆ ಎಂದು ಹೇಳಿದರು.

****************

ಹೊಸ ಪಿಂಚಣಿ ಪದ್ಧತಿ – ಎನ್‌ಪಿಎಸ್ ರದ್ದುಪಡಿಸಿ ಹಳೆ ಪಿಂಚಣಿ ಪದ್ಧತಿ ಮರು ಜಾರಿ ಮಾಡಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ವಿಧಾನ ಪರಿಷತ್ ಸಭಾ ನಾಯಕ, ಎನ್.ಎಸ್. ಬೋಸರಾಜು ಮೇಲ್ಮನೆಯಲ್ಲಿಂದು ತಿಳಿಸಿದರು.

ಪ್ರಶ್ನೋತ್ತರ ಕಲಾಪದಲ್ಲಿ ರಾಮೋಜಿಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ನಮ್ಮ ಸರ್ಕಾರ ಚುನಾವಣಾ ಪ್ರಣಾಳಿಕೆಯಲ್ಲಿಯೇ ಇದನ್ನು ಘೋಷಿಸಿದೆ. ಈ ಸಂಬಂಧಿಸಿದಂತೆ ಹಲವು ಸುತ್ತಿನ ಸಭೆಗಳು ಸಹ ನಡೆದಿವೆ. ಕೇಂದ್ರ ಸರ್ಕಾರದಿಂದಲೂ ಸಹ ಈ ಸಂಬಂಧ ವರದಿ ಬರಬೇಕಿದ್ದು, ಆದಷ್ಟು ಬೇಗ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ಕೃಷ್ಣಾ ಮೇಲ್ದಂಡೆ ಯೋಜನೆಯ ಹಂತ– 3ರಡಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆ ಮಟ್ಟವನ್ನು 519.60 ಮೀಟರ್ ನಿಂದ 524.25 ಮೀಟರ್‌ಗೆ ಹೆಚ್ಚಿಸುವುದರಿಂದ ಲಕ್ಷಾಂತರ ಎಕರೆಗೆ ನೀರಾವರಿ ಸೌಲಭ್ಯ ದೊರೆಯಲಿದ್ದು, ಇದಕ್ಕಾಗಿ 1 ಲಕ್ಷದ 33 ಸಾವಿರದ 867 ಎಕರೆ ಭೂಸ್ವಾಧಿನ ಪಡಿಸಿಕೊಳ್ಳಲು  ಗುರುತಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಪಿ.ಎಚ್. ಪೂಜಾರ ಮತ್ತು ನಿರಾಣಿ ಹನುಮಂತಪ್ಪ ರುದ್ರಪ್ಪ ಅವರ ಪ್ರಸ್ತಾಪಕ್ಕೆ ಉತ್ತರಿಸಿದ ಅವರು, ಭೂಸ್ವಾಧಿನಕ್ಕಾಗಿ ಹಣಕಾಸು ಒದಗಿಸುವ ಸಂಬಂಧ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದರು.

ಗ್ಯಾರಂಟಿಗಳ ಅನುಷ್ಠಾನ ಸಮಿತಿಗೆ ಕಾಂಗ್ರೆಸ್ ಕಾರ್ಯಕರ್ತರನ್ನು ನೇಮಿಸಿಕೊಂಡು ಸರ್ಕಾರದ ಹಣ ದುರ್ಬಳಕೆ ಮಾಡಿಕೊಳ್ಳಲಾಗುತ್ತದೆ ಎಂಬ ವಿಚಾರವಾಗಿ ವಿಧಾನಪರಿಷತ್ತಿನಲ್ಲಿ ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಸರ್ಕಾರದ ವಿರುದ್ಧ  ಅಸಮಾಧಾನ ವ್ಯಕ್ತಪಡಿಸಿದರು.

ಸಭಾಪತಿ ಬಸವರಾಜ ಹೊರಟ್ಟಿ ಅವರು ಮಧ್ಯ ಪ್ರವೇಶಿಸಿ, ಗ್ಯಾರಂಟಿ ಅನುಷ್ಠಾನ ಮತ್ತು ಮೌಲ್ಯಮಾಪನದ ವಿಚಾರವನ್ನು ಪ್ರತ್ಯೇಕವಾಗಿ ಚರ್ಚಿಸಲು ಅರ್ಧಗಂಟೆ ಸಮಯ ಮೀಸಲಿಡಲಾಗುವುದು ಎಂದು ಹೇಳಿ ವಿವಾದಕ್ಕೆ ತೆರೆ ಎಳೆದರು.

****************

ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಎಡದಂಡೆ ಕಾಲುವೆಗೆ ಏಪ್ರಿಲ್ 10 ರವರೆಗೆ ನಿರಂತರವಾಗಿ ನೀರು ಹರಿಸಬೇಕು ಎಂದು ಯಾದಗಿರಿ ಜಿಲ್ಲೆಯ ಸುರಪುರ ಮತಕ್ಷೇತ್ರದ ಶಾಸಕ ರಾಜಾ ವೇಣುಗೋಪಾಲನಾಯಕ್ ಅವರು ಬುಧವಾರ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದರು.

ಕೃಷ್ಣಾ ಅಚ್ಚುಕಟ್ಟು ಪ್ರದೇಶದ ಕಾಲುವೆಗಳಿಗೆ ನೀರು ಹರಿಸುವ ಕುರಿತು ನಾಳೆ ಸಂಜೆ 4 ಗಂಟೆಗೆ ಬೆಂಗಳೂರಿನಲ್ಲಿ ನೀರಾವರಿ ಸಲಹಾ ಸಮಿತಿ ಸಭೆ ಕರೆಯಲಾಗಿದೆ.

****************

ಚಿಕ್ಕಮಗಳೂರು ಜಿಲ್ಲೆಯಲ್ಲಿ ಈ ವರ್ಷ ಜನವರಿಯಿಂದ ಈವರೆಗೆ ಸುಮಾರು 56 ಕಾಡ್ಗಿಚ್ಚು ಪ್ರಕರಣಗಳು ದಾಖಲಾಗಿದ್ದು ಕಾಡ್ಗಿಚ್ಚಿನಿಂದಾಗಿ 300ಕ್ಕೂ ಹೆಚ್ಚು ಎಕರೆ ಅರಣ್ಯ ಪ್ರದೇಶ ನಾಶವಾಗಿದೆ ಎಂದು ಚಿಕ್ಕಮಗಳೂರು ಅರಣ್ಯ ಉಪ ಸಂರಕ್ಷಣ ಅಧಿಕಾರಿ ರಮೇಶ್ ಬಾಬು ತಿಳಿಸಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಈ ವರ್ಷ ಅತಿ ಹೆಚ್ಚು ಕಾಡ್ಗಿಚ್ಚು ಪ್ರಕರಣಗಳು ಸಂಭವಿಸಿವೆ ಎಂದರು.

****************

ಮುಂಬೈನ ಬ್ರಬೋರ್ನ್ ಕ್ರೀಡಾಂಗಣದಲ್ಲಿ ಇಂದು ಸಂಜೆ ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್‌ನಲ್ಲಿ, ಮುಂಬೈ ಇಂಡಿಯನ್ಸ್ ಎಲಿಮಿನೇಟರ್ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ವಿರುದ್ಧ ಸೆಣಸಲಿದೆ.

ಈ ಪಂದ್ಯವು ಭಾರತೀಯ ಕಾಲಮಾನ ಸಂಜೆ 7:30 ಕ್ಕೆ ಆರಂಭವಾಗಲಿದೆ.

ಡೆಲ್ಲಿ ಕ್ಯಾಪಿಟಲ್ಸ್ ಈಗಾಗಲೇ 10 ಅಂಕಗಳೊಂದಿಗೆ ಒಟ್ಟಾರೆ ಅಂಕಪಟ್ಟಿಯಲ್ಲಿ ಅಗ್ರಸ್ಥಾನ ಪಡೆಯುವ ಮೂಲಕ ಟೂರ್ನಿಯ ಫೈನಲ್ ತಲುಪಿದೆ. ಮುಂಬೈ ಎರಡನೇ ಸ್ಥಾನದಲ್ಲಿದ್ದರೆ, ಗುಜರಾತ್ ಜೈಂಟ್ಸ್ ಮೂರನೇ ಸ್ಥಾನ ಪಡೆದುಕೊಂಡಿದ್ದು, ಉಳಿದ ಅಂತಿಮ ಸ್ಥಾನಕ್ಕಾಗಿ ಎರಡೂ ತಂಡಗಳ ನಡುವೆ ಹಣಾಹಣಿ ಏರ್ಪಟ್ಟಿದೆ.

****************

**ಸಂಕ್ಷಿಪ್ತ ಸುದ್ದಿಗಳು**

1. **ಯಾದಗಿರಿ** ಜಿಲ್ಲೆಯಲ್ಲಿ 91 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು, ಟ್ಯಾಂಕರ್ ಮೂಲಕ ನೀರು ಪೂರೈಸಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯ ನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ತಿಳಿಸಿದ್ದಾರೆ.
2. **ಗದಗ ಜಿಲ್ಲೆಯ** ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮುಖ್ಯ ಕಾರ್ಯ ನಿರ್ವಾಹಕರುಗಳಿಗಾಗಿ ವಿಶೇಷ ಸಹಕಾರ ತರಬೇತಿ ಶಿಬಿರ ನಗರದ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸಭಾಭವನದಲ್ಲಿಂದು ಜರುಗಿತು.

********ಮುಖ್ಯಾಂಶಗಳು ********